ಇ) ಇಲ್ಲ.

ಈ) ಸರ್ಕಾರವು ಮಳೆ ಹಾಗೂ ಕೃಷಿ ಚಟುವಟಿಕೆಗಳನ್ನು ಆಧಾರವಾಗಿಟ್ಟುಕೊಂಡು ಬರಪೀಡಿತ ತಾಲ್ಲೂಕುಗಳನ್ನು ಗುರುತಿಸಬೇಕಾಗುತ್ತದೆ. ಆದರೆ, ಈ ಎರಡು ಅಂಶಗಳನ್ನು ಪರಿಗಣಿಸಿ, ದಾವಣಗೆರೆ ತಾಲ್ಲೂಕನ್ನು ಬರ ಪೀಡಿತ ತಾಲ್ಲೂಕೆಂದು ಗುರುತಿಸಿಲ್ಲ.

ವಿಷಯ: ತೆಲುಗು ಗೌಡ ಜನಾಂಗದವರ ಬೇಡಿಕೆಗಳು

1075 (1446)

ಶ್ರೀ ಸಿ.ಆರ್.ಸಗೀರ್ ಅಹಮ್ಮದ್ (ಚಿಕ್ಕಮಗಳೂರು): ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ತೆಲುಗು ಗೌಡ ಎಂಬ ವರ್ಗ ಯಾವ ಯಾವ ಜಿಲ್ಲೆಗಳಲ್ಲಿ ವಾಸಿಸುತ್ತಿದ್ದಾರೆ?

ಆ) ಈ ವರ್ಗವು ಹಿಂದುಳಿದ ವರ್ಗದವರ ಪಟ್ಟಿಯಲ್ಲಿ ಸೇರಿಸುವ ಬಗ್ಗೆ ಸರ್ಕಾರದವರಿಗೆ ಬೇಡಿಕೆ ಬಂದಿದೆಯೇ?

ಇ) ಬೇಡಿಕೆ ಬಂದಿದ್ದಲ್ಲಿ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಮಾಲೀಕಯ್ಯ ವಿ. ಗುತ್ತೇದಾರ್ (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು):

ಅ) ಸಧ್ಯ ಲಭ್ಯವಿರುವ ಮಾಹಿತಿಯನ್ವಯ ಕರ್ನಾಟಕ ರಾಜ್ಯದಲ್ಲಿ ತೆಲುಗು ಗೌಡ ಜಾತಿಗೆ ಸೇರಿದ ಜನಾಂಗದವರು ಹೆಚ್ಚಾಗಿ ಚಿಕ್ಕಮಗಳೂರು ಜಿಲ್ಲೆಯ ಕಡೂರು ಹಾಗೂ ತರೀಕೆರೆ ತಾಲ್ಲೂಕುಗಳಲ್ಲಿ ವಾಸಿಸುತ್ತಾರೆ.

ಆ) ಹೌದು.

ಇ) ಹಿಂದುಳಿದ ವರ್ಗಗಳ ಜಾತಿಗಳನ್ನು ಗುರುತಿಸಿ ಆ ಬಗ್ಗೆ ಅಧ್ಯಯನ ಮಾಡಲು ಸರ್ಕಾರದವರು ಹಿಂದುಳಿದ ವರ್ಗಗಳ ಶಾಶ್ವತ ಆಯೋಗವನ್ನು ಸ್ಥಾಪಿಸಿದ್ದು, ತೆಲುಗು ಗೌಡ ಜಾತಿಯನ್ನು ಹಿಂದುಳಿದ ವರ್ಗಗಳ ಜಾತಿಯ ಪಟ್ಟಿಯಲ್ಲಿ ಸೇರಿಸುವ ಬಗ್ಗೆ ಪರಿಶೀಲಿಸಿ ವರದಿ ನೀಡಲು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗವನ್ನು ಕೋರಲಾಗಿದೆ.